**<u>ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ. ಪ್ರತಾಪ್ ಸಿಂಹ ನಾಯಕ್ ಕೆ.ರವರು ನಿಯಮ 72 ರ ಅಡಿಯಲ್ಲಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಯ ಈ ಕೆಳಕಂಡ ಪ್ರಶ್ನೆಗೆ ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರ ಉತ್ತರ.</u>**

**ಪ್ರಶ್ನೆ:** ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಈ ಬಾರಿ ಸುರಿದ ಅಧಿಕ ಮಳೆಯ ಕಾರಣದಿಂದ ಅಡಿಕೆ ಬೆಳೆಗೆ ತೀವ್ರ ಪ್ರಮಾಣದಲ್ಲಿ ಹಾನಿಯಾಗಿದ್ದು, ಅಡಿಕೆ ಬೆಳೆಗಾರರು ಆರ್ಥಿಕವಾಗಿ ಅತ್ಯಂತ ಸಂಕಷ್ಟದ ಪರಿಸ್ಥಿತಿಗೆ ಸಿಲುಕಿದ್ದಾರೆ. ಜಿಲ್ಲೆಯಲ್ಲಿ ಅಕಾಲಿಕ ಮತ್ತು ವಾಡಿಕೆಗಿಂತ ಅತೀ ಹೆಚ್ಚು ಮಳೆ ಸುರಿದ ಕಾರಣದಿಂದ ಅಡಕೆಗೆ ಕೊಳೆರೋಗ ವ್ಯಾಪಕವಾಗಿ ಹರಡಿ, ಶೇ.70 ಕ್ಕಿಂತಲೂ ಅಧಿಕ ಪ್ರಮಾಣದಲ್ಲಿ ಬೆಳೆ ಹಾನಿಯಾಗಿದೆ.

ಅಡಿಕೆ ಬೆಳೆಹಾನಿಗೆ ಸಂಬಂಧಿಸಿದಂತೆ ವೈಜ್ಞಾನಿಕವಾದ ಸರ್ವೆ ಮಾಡಿ, ಜಿಲ್ಲೆಯ ಅಡಿಕೆ ಬೆಳೆಗಾರರಿಗೆ ಸೂಕ್ತ ಹಾಗೂ ಅರ್ಹ ಮೊತ್ತದ ಪರಿಹಾರವನ್ನು ವಿತರಣೆ ಮಾಡಲು ಸರ್ಕಾರ ಇದುವರೆಗೆ ಯಾವುದೇ ಕ್ರಮ ವಹಿಸದೇ ಇರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರ ಗಮನವನ್ನು ಸೆಳೆಯಲು ಬಯಸುತ್ತೇನೆ.

****

**<u>ಉತ್ತರ:</u>** ರಾಜ್ಯದಲ್ಲಿ ಅಡಿಕೆ ಬೆಳೆಯನ್ನು 6.92 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬೆಳೆಯಲಾಗುತ್ತಿದ್ದು, ಇದರ ಉತ್ಪಾದನೆ ಅಂದಾಜು 10.19 ಲಕ್ಷ ಮೆ.ಟನ್ ಗಳಾಗಿರುತ್ತದೆ. ಅಡಿಕೆ ಬೆಳೆಯನ್ನು ಪ್ರಮುಖವಾಗಿ ಶಿವಮೊಗ್ಗ, ದಕ್ಷಿಣ ಕನ್ನಡ, ತುಮಕೂರು, ಹಾಸನ, ಚಿಕ್ಕಮಗಳೂರು, ದಾವಣಗೆರೆ, ಚಿತ್ರದುರ್ಗ, ಉತ್ತರಕನ್ನಡ ಹಾಗೂ ಕೊಡಗು ಜಿಲ್ಲೆಗಳಲ್ಲಿ ಬೆಳೆಯಲಾಗುತ್ತಿದೆ. ಹವಾಮಾನ ವೈಪರೀತ್ಯದಿಂದಾಗಿ ವಾತಾವರಣದಲ್ಲಿ ಕಡಿಮೆ ಉಷ್ಣಾಂಶ (20 ರಿಂದ 25 ಡಿಗ್ರಿ ಸೆಂಟಿ ಗ್ರೇಡ್‌ಗಿಂತ ಕಡಿಮೆ), ತೇವಾಂಶ ಶೇ 90% ಕಿಂತ ಅಧಿಕವಾಗಿದ್ದರಿಂದ ಹಾಗೂ ಮಳೆಯ ಏರುಪೇರುನಿಂದಾಗಿ ಮೋಡ ಕವಿದ ವಾತಾವರಣದಿಂದ ಅಡಿಕೆ ಬೆಳೆಯು ಕೊಳೆ ರೋಗದಿಂದ ಹಾನಿಗೊಳಗಾಗಿದೆ.

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅಂದಾಜು 830 ಹೆಕ್ಟೇರ್‌ಗಳಲ್ಲಿ ಅಡಿಕೆ ಬೆಳೆಯು ಕೊಳೆ ರೋಗದಿಂದ ಬಾಧಿತವಾಗಿರುವುದಾಗಿ ಅಂದಾಜಿಸಲಾಗಿದೆ. ಅದರಲ್ಲಿ NDRF/SDRF ಮಾರ್ಗಸೂಚಿಯನ್ವಯ ಪರಿಹಾರ ಪಡೆಯಲು 30.62 ಹೆಕ್ಟೇರ್ ಹಾನಿಯಾದ ಪ್ರದೇಶ ಅರ್ಹವಾಗಿದೆ (ಶೇ. 33 % ಕ್ಕಿಂತ ಹೆಚ್ಚಾಗಿ ಹಾನಿಯಾದ ಪ್ರದೇಶ).

**ಅಡಿಕೆ ಕೊಳೆರೋಗ ನಿಯಂತ್ರಿಸಲು ತೋಟಗಾರಿಕೆ ಇಲಾಖೆಯಿಂದ ತೆಗೆದುಕೊಂಡ ಕ್ರಮಗಳು ಈ ಕೆಳಗಿನಂತಿವೆ:**

1. ರಾಷ್ಟ್ರೀಯ ತೋಟಗಾರಿಕೆ ಮಿಶನ್ ಯೋಜನೆಯಡಿ ಅಡಿಕೆ ಬೆಳೆ ಸೇರಿದಂತೆ ತೋಟಗಾರಿಕೆ ಬೆಳೆಗಳ ಸಮಗ್ರ ರೋಗ/ಕೀಟಗಳ ಹಾಗೂ ಪೋಷಕಾಂಶಗಳ ನಿರ್ವಹಣೆಗಾಗಿ ರೂ.5000/- ಪ್ರತಿ ಹೆಕ್ಟೇರ್ ಘಟಕ ವೆಚ್ಚದಡಿ ಸಸ್ಯ ಸಂರಕ್ಷಣಾ ಔಷಧಿಗಳ ಖರೀದಿಗೆ ರೈತರಿಗೆ ಶೇ.30ರಂತೆ ಪ್ರತಿ ಹೆಕ್ಟೇರ್‌ಗೆ ರೂ.1,500 ಗಳಂತೆ 2 ಹೆಕ್ಟೇರ್ ವರೆಗೆ ರೂ.3,000 ಗಳ ಸಹಾಯಧನ ನೀಡಲಾಗುತ್ತಿದೆ. ಪ್ರಸಕ್ತ ಸಾಲಿನಲ್ಲಿ ದಕ್ಷಿಣ ಕನ್ನಡ ಜಿಲ್ಲೆಗೆ ರೂ.15.00 ಲಕ್ಷಗಳು ನಿಗಧಿಯಾಗಿದ್ದು, ಈವರೆಗೂ ರೂ. 9.24 ಲಕ್ಷಗಳ ಸಹಾಯಧನವನ್ನು 485 ಫಲಾನುಭವಿಗಳಿಗೆ ಪಾವತಿಸಲಾಗಿರುತ್ತದೆ.
2. ಮುಂಗಾರು ಮತ್ತು ಹಿಂಗಾರು ಹಂಗಾಮುಗಳಿಗೆ ಮರುವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬೆಳೆವಿಮೆ ಯೋಜನೆಯಡಿ ಜಿಲ್ಲೆಗಳಿಗೆ ಅಡಿಕೆ ಬೆಳೆಯು ಅಧಿಸೂಚಿತವಾಗಿದ್ದು, ಹವಾಮಾನ ವೈಪರೀತ್ಯದಿಂದ ಬೆಳೆ ನಷ್ಟ ಸಂಭವಿಸಿದಲ್ಲಿ ಇದರ ಯೋಜನೆಯಡಿ ವಿಮಾ ಪರಿಹಾರವನ್ನು ಒದಗಿಸಲಾಗುತ್ತಿದೆ. ಅಡಿಕೆ ಬೆಳೆ ವಿಮೆ ವಿವರ ಈ ಕೆಳಕಂಡಂತಿವೆ.

| ಕ್ರ. ಸಂ. | 2024-2025 ನೇ ಸಾಲಿನ ಬೆಳೆ ವಿಮೆ ವಿವರ | ದಕ್ಷಿಣ ಕನ್ನಡ ಜಿಲ್ಲೆ |
|---|---|---|
| 1. | ಅರ್ಜಿಗಳ ಸ್ವೀಕೃತ (ಸಂಖ್ಯೆ) | 242550 |
| 2. | ವಿಸ್ತೀರ್ಣ (Covered) ಹೆಕ್ಟೇರ್ ಗಳಲ್ಲಿ | 55637 |
| 3. | ವಿಮಾ ಮೊತ್ತ (Sum insured) (Amount in Lakhs) | 71216.58 |
| 4. | ಪಾವತಿಸಲಾದ ವಿಮಾ ಮೊತ್ತ (Claim amount in Lakhs) | 14185.53 |
| 5. | ಫಲಾನುಭವಿಗಳ ಸಂಖ್ಯೆ | 139423 |
| 6. | 2025-2026 ನೇ ಸಾಲಿನ ಬೆಳೆ ವಿಮೆ ಅರ್ಜಿಗಳ ಸ್ವೀಕೃತ (ಸಂಖ್ಯೆ) | 296068 |
| 7. | ವಿಮಾ ಮೊತ್ತ (Sum insured) (Amount in Lakhs) | 84074.68 |

3. ಅಡಿಕೆ ಬೆಳೆಯ ಕೊಳೆರೋಗದ ಲಕ್ಷಣ ಹಾಗೂ ನಿರ್ವಹಣೆ ಕ್ರಮಗಳ ಕುರಿತು ಇಲಾಖಾ ಅಧಿಕಾರಿಗಳ ವತಿಯಿಂದ ರೈತರ ತಾಕುಗಳಿಗೆ ಭೇಟಿ ನೀಡಿ ನಿರ್ವಹಣೆ ಕ್ರಮಗಳ ಕುರಿತು 8 ತರಬೇತಿ ಹಾಗೂ ಪ್ರಾತ್ಯಕ್ಷತೆ ಕಾರ್ಯಕ್ರಮಗಳನ್ನು ಕೈಗೊಂಡು 760 ರೈತರಿಗೆ ಮಾಹಿತಿ ನೀಡಲಾಗಿರುತ್ತದೆ.
4. ಪ್ರಸಕ್ತ ಸಾಲಿಗೆ ಅಡಿಕೆ ಬೆಳೆಗೆ ರೋಗಗಳು ಹಾಗೂ ಪೋಷಕಾಂಶಗಳ ಸಮಗ್ರ ನಿರ್ವಹಣೆಗೆ ಒಟ್ಟಾರೆ ರೂ.57776.33 ಲಕ್‌ಷಗಳ ಪ್ರಸ್ತಾವನೆಯನ್ನು ಸಿದ್ಧಪಡಿಸಿದ್ದು ಇದರಲ್ಲಿ MIDH ಮಾರ್ಗಸೂಚಿಯನ್ವಯ ಶೇ.30 ರಷ್ಟು ಸಹಾಯಧನದಂತೆ ಒಟ್ಟು ರೂ.17332.90 ಲಕ್ಷಗಳ ಬೇಡಿಕೆಯ ಪ್ರಸ್ತಾವನೆಯನ್ನು (ಕೇಂದ್ರ ಪಾಲು ರೂ.10399.74 ಲಕ್ಷಗಳು ಹಾಗೂ ರಾಜ್ಯ ಪಾಲು ರೂ.6933.14 ಲಕ್ಷಗಳು) ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿದೆ.
5. ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಶಿವಮೊಗ್ಗದ ತಜ್ಞರು ಹಾಗೂ ಇಲಾಖೆಯ ಅಧಿಕಾರಿಗಳ ಸಹಯೋಗದೊಂದಿಗೆ ಕೈಪಿಡಿ, ಕರಪತ್ರಗಳು ಮತ್ತಿತರೆ ಸಮೂಹ ಮಾಧ್ಯಮಗಳ ಮೂಲಕ ಅಡಿಕೆ ತೋಟಗಳ ಪೋಷಕಾಂಶ ನಿರ್ವಹಣೆ, ಬಸಿ ಕಾಲುವೆಗಳನ್ನು ಮಾಡುವುದು, ಹಸಿರೆಲೆ ಗೊಬ್ಬರದ ಬಳಕೆ ಹಾಗೂ ರಸ ಗೊಬ್ಬರಗಳ ಪೂರೈಕೆಗಳ ಕುರಿತು ಕೈಪಿಡಿ, ಕರಪತ್ರಗಳು ಮತ್ತಿತರೆ ಸಮೂಹ ಮಾಧ್ಯಮಗಳ ಮೂಲಕ ಪ್ರಚಾರ ಕೈಗೊಳ್ಳಲಾಗುತ್ತಿದೆ ಹಾಗೂ ತರಬೇತಿ/ ಕಾರ್ಯಾಗಾರಗಳ ಮೂಲಕ ರೈತರಿಗೆ ಅರಿವು ಮೂಡಿಸಲಾಗುತ್ತಿದೆ.
6. ಹಿಂದಿನ ಸಾಲಿನಲ್ಲಿ ಬೆಳೆ ಹಾನಿಯಾಗಿರುವ ಅಂದಾಜು 79,123.67 ಹೆಕ್ಟೇರ್ ಪ್ರದೇಶಕ್ಕೆ ಪ್ರತಿ ಹೆಕ್ಟೇರ್ ಗೆ NDRF/SDRF ಮಾರ್ಗಸೂಚಿಯನ್ವಯ ರೂ.22,500/-ಗಳಂತೆ ಅಡಿಕೆ ಕೊಳೆ ರೋಗ ಬಾಧಿತ ರೈತರಿಗೆ ಪರಿಹಾರ ಒದಗಿಸಲು ಕೇಂದ್ರ ಸರ್ಕಾರಕ್ಕೆ ರೂ.178.03 ಕೋಟಿಗಳ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ. ದಕ್ಷಿಣ ಕನ್ನಡ ಜಿಲ್ಲೆಗೆ ರೂ.1.87 ಕೋಟಿಗಳು ನಿಗಧಿಯಾಗಿದೆ.
7. 30.62 ಹೆಕ್ಟೇರ್ ಹಾನಿಯಾದ ತೋಟಗಾರಿಕೆ ಬೆಳೆಗಳಿಗೆ ಪ್ರತಿ ರೈತರಿಗೆ 2.00 ಹೆಕ್ಟೇರ್‌ಗೆ ಮಿತಿಗೊಳಿಸಿ ಬಹುವಾರ್ಷಿಕ ಬೆಳೆಗಳಿಗೆ ಕೇಂದ್ರ ಸರ್ಕಾರದ NDRF/SDRF ಮಾರ್ಗಸೂಚಿಯನ್ವಯ ರೂ. 22500 ಪ್ರತಿ ಹೆಕ್ಟೇರ್ ಗೆ ಮತ್ತು ರಾಜ್ಯ ಸರ್ಕಾರದಿಂದ ಹೆಚ್ಚಿಸಿರುವ Input subsidy ಪ್ರತಿ ಹೆಕ್ಟೇರ್ ಗೆ ರೂ. 8500 ಎಲ್ಲಾ ಸೇರಿ ಒಟ್ಟು ಪ್ರತಿ ಹೆಕ್ಟೇರ್ ಗೆ ರೂ. 31000 ಪರಿಹಾರವನ್ನು ಕಂದಾಯ ಇಲಾಖೆಯ ಪರಿಹಾರ ತಂತ್ರಾಂಶದ ಮೂಲಕ ವಿತರಿಸಲಾಗುತ್ತದೆ. ಇಲ್ಲಿಯವರೆಗೂ ಕೃಷಿ ಹಾಗೂ ತೋಟಗಾರಿಕೆ ಬೆಳೆಹಾನಿಯಾದ ಒಟ್ಟು 244 ರೈತರಿಗೆ ರೂ. 16.63 ಲಕ್ಷಗಳನ್ನು ಕಂದಾಯ ಇಲಾಖೆಯ ಪರಿಹಾರ ತಂತ್ರಾಂಶದ ಮೂಲಕ ವಿತರಿಸಲಾಗಿದೆ.

8. ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ (MGNREGA) ಅಡಿಯಲ್ಲಿ ಅಡಿಕೆ ತೋಟಗಳನ್ನು ನಿರ್ಮಾಣ ಮಾಡಲು ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಹಾಗೂ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ ಫಲಾನುಭವಿಗಳಿಗೆ ಕೂಲಿ ಹಾಗೂ ಸಾಮಗ್ರಿ ವೆಚ್ಚಸೇರಿ ಪ್ರತಿ ಹೆಕ್ಟೇರ್ ಗೆ ರೂ. 1.96 ಲಕ್ಷಗಳ ವರೆಗೆ ನೆರವು ನೀಡಲಾಗುತ್ತಿದೆ. ಈವರೆಗೂ 230.66 ಹೆಕ್ಟೇರ್‌ಗಳಿಗೆ ರೂ.646.99 ಲಕ್ಷಗಳ ಸಹಾಯಧನವನ್ನು ನೀಡಲಾಗಿದೆ.

ಅಡಿಕೆ ಬೆಳೆಗಾರರಿಗೆ ಬೆಳೆ ಹಾನಿಗೆ ಪರಿಹಾರ ನೀಡುವ ಕಾರ್ಯಕ್ರಮ ತೋಟಗಾರಿಕೆ ಇಲಾಖೆಯಲ್ಲಿ ಇರುವುದಿಲ್ಲ.

**ಸಂಖ್ಯೆ: HORTI 572 HGM 2025**

**(ಎಸ್. ಎಸ್. ಮಲ್ಲಿಕಾರ್ಜುನ್)**
**ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು**